<u>ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಆಲೂರು.</u>

**ಸಿ.ಸಿ.ಸಂಖ್ಯೆ: 1166/21**

| | | |
|---|---|---|
| ಸಾಕ್ಷಿದಾರರ ಹೆಸರು | ಕಾಂತರಾಜು | ಸಿ.ಡಬ್ಲ್ಯೂ: 12 |
| ಗಂಡನ / ತಂದೆ ಹೆಸರು | ಶಿವಪ್ಪಗೌಡ | ಪಿ.ಡಬ್ಲ್ಯೂ: 3 |
| ವಯಸ್ಸು | 60 ವರ್ಷ | |
| ಉದ್ಯೋಗ | ವ್ಯವಸಾಯ | |
| ವಾಸಸ್ಥಳ | ಕಡಬಗಾಲ | |

ಪ್ರಮಾಣ ವಚನ ಬೋಧಿಸಲಾಯಿತು.

ದಿಃ 09.04.2026

**ಮುಖ್ಯ ವಿಚಾರಣೆಃ ಸಸಅ ರಿಂದ**

ಚಾಸಾ 1 ರವರ ಪರಿಚಯ ಇರುತ್ತದೆ. ಅವರು ಈಗ ಮರಣ ಹೊಂದಿರುತ್ತಾರೆ. ಮೃತ ಸುಗತ್ ರವರ ಪರಿಚಯ ಇರುತ್ತದೆ. ನಾನು ಮನೆಯಲ್ಲಿದ್ದಾಗ ಚಾಸಾ 1 ರವರು ಬಂದು ಅವರ ಮಗನಿಗೆ ಅಪಘಾತವಾಗಿರುತ್ತದೆ ಎಂದು ಆಸ್ಪತ್ರೆಗೆ ಹೋಗಲು ಕರೆದಿರುತ್ತಾರೆ. ಆಸ್ಪತ್ರೆಗೆ ಹೋಗುವಷ್ಟರಲ್ಲಿ ಅವರ ಮಗ ಮೃತಪಟ್ಟಿರುತ್ತಾನೆ. ಅಪಘಾತ ಹೇಗೆ, ಎಲ್ಲಿ ಆಗಿರುತ್ತದೆ ಎಂದು ಗೊತ್ತಿರುವುದಿಲ್ಲ.

(ಈ ಸಂದರ್ಭದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ಅನುಮತಿಯನ್ನು ನೀಡಲಾಯಿತು.)

**ಪಾಟೀ ಸವಾಲುಃ ಸ.ಸ.ಅರವರಿಂದಃ**

ದಿ.04.08.2021 ರಂದು ರಾತ್ರಿ 7.50 ಕ್ಕೆ ಸುಗತ್ ರವರ ಸ್ಕೂಟಿ ನಂ. ಕೆಎ 13 ಆರ್ 8786 ವಾಹನದಲ್ಲಿ ಬಂದು ವಾಹನವನ್ನು ನಿಲ್ಲಿಸಿ ನನ್ನ ಜೊತೆ ಮಾತನಾಡಿ ನಂತರ ಸುಮಾರು 8.00 ಗಂಟೆಗೆ ಅವರು ಊರಿಗೆ ಹೋಗಲೆಂದು ರಸ್ತೆಯ ಪಕ್ಕ ನಿಲ್ಲಿಸಿದ್ದ ಸ್ಕೂಟಿಯನ್ನು ಹತ್ತಲು ನಿಂತಿದ್ದಾಗ ಆಲೂರು ಕಡೆಯಿಂದ ಕೆಎ 04 ಎಂ ಕೆ 9013 ಕಾರಿನ ಚಾಲಕ ಅತಿವೇಗ ಮತ್ತು ಅಜಾಗರೂಕತೆಯಿಂದ ಬಂದು ಎಡಬದಿಯ ಫುಟ್ಪಾತ್ ಮೇಲೆ ನಿಂತಿದ್ದ ಸುಗತ್‌ರವರಿಗೆ ಅಪಘಾತವಾಗಿರುತ್ತದೆ ಎಂದು ತಿಳಿದುಬಂದಿರುತ್ತದೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿರಾಕರಿಸಿದ ಕಾರಣ ಅದನ್ನು ನಿಪಿ- 9 ಎಂದು ಗುರುತಿಸಲಾಯಿತು. ನಿಪಿ 9 ರ ಬಗ್ಗೆ ಮಾಹಿತಿ ಇದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.**

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಶ್ರೀಮತಿ ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಆಲೂರು .